ಎ-72-115

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ರವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ:**

**ವಿಷಯ:**

ಕೋಲಾರ ತಾಲ್ಲೂಕು ಮತ್ತು ಜಿಲ್ಲೆಯ ದೊಡ್ಡ ಅಯ್ಯೂರು ಗ್ರಾಮದ ಸರ್ವೆ ನಂ. 76 ರಲ್ಲಿ 19 ಎಕರೆ 20 ಗುಂಟೆ ಜಮೀನನ್ನು 20 ವರ್ಷಗಳಿಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುತ್ತಿಗೆ ನೀಡಲಾಗಿದೆ. ಆದರೆ ದೊಡ್ಡ ಅಯ್ಯೂರು ಗ್ರಾಮಸ್ಥರಿಂದ ನಿರಾಕ್ಷೇಪಣಾ ಪತ್ರ ಪಡೆದಿರುವುದಿಲ್ಲ. ಸದರಿ ಸರ್ವೆ ನಂಬರ್ ಜಮೀನು ಗೋಮಾಳಕ್ಕೆ ಅಂಟಿಕೊಂಡ ಜಮೀನುಗಳಲ್ಲಿ ತೋಟಗಾರಿಕೆ, ಹೈನುಗಾರಿಕೆ, ರೇಷ್ಮೆ ಹಾಗೂ ಕೋಳಿ ಸಾಗಾಣಿಕೆ, ಕೃಷಿ ಚಟುವಟಿಕೆ ಮಾಡಿಕೊಂಡು ರೈತರು ಜೀವನ ಸಾಗಿಸುತ್ತಿದ್ದಾರೆ ಹಾಗೂ ಕೆರೆಗಳಿಗೆ ಕೆ.ಸಿ.ವ್ಯಾಲಿಯ ನೀರು ಬಂದಿದ್ದು, ಈ ಎಲ್ಲಾ ಚಟುವಟಿಕೆಗಳನ್ನು ರೈತರು ಬಹಳ ವರ್ಷಗಳಿಂದ ನಡೆಸಿಕೊಂಡು ಬರುತ್ತಿದ್ದಾರೆ. ಇದಲ್ಲದೇ ಸುತ್ತ ಮುತ್ತಲಿನ ಹಳ್ಳಿಗಳು ಬೆಟ್ಟಗುಡ್ಡಗಳಿಂದ ಕೂಡಿದ್ದು, ಅಂತರ್ಜಲ ವೃದ್ಧಿಯಾಗುತ್ತಿದೆ. ಇಲ್ಲಿ ಸುಮಾರು 800 ವರ್ಷಗಳ ಪುರಾತನ ದೇವಸ್ಥಾನವಿದ್ದು, ಇದು ಮುಜುರಾಯಿ ಇಲಾಖೆಗೆ ಒಳಪಟ್ಟಿರುತ್ತದೆ. ಆದರೆ ಗ್ರಾಮಸ್ಥರ ಗಮನಕ್ಕೆ ಬಾರದೆ, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಕೆಲವು ಅಧಿಕಾರಿಗಳ ಸಹಾಯದಿಂದ ಅಕ್ರಮ ಗಣಿಗಾರಿಕೆ ನೆಡಸುತ್ತಿದ್ದಾರೆ.

ಇದೊಂದು ಸಾರ್ವಜನಿಕ ಗಂಭೀರ ವಿಷಯವಾಗಿರುವುದರಿಂದ ಇದನ್ನು ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2016ರ ನಿಯಮ 31-ZC ರಂತೆ ದಿನಾಂಕ 12.08.2016 ರ ಪೂರ್ವದಲ್ಲಿ ಎಂ-ಸ್ಯಾಂಡ್ ತಯಾರಿಸುತ್ತಿರುವ ಸ್ಟೋನ್ ಕ್ರಷರ್ ಘಟಕದ ಮಾಲೀಕರಿಗೆ ಸದರಿ ದಿನಾಂಕದಂದು ಉತ್ಪಾದಿಸುತ್ತಿರುವ ಎಂ-ಸ್ಯಾಂಡ್ ಪ್ರಮಾಣವನ್ನು ದ್ವಿಗುಣಗೊಳಿಸಲು ಹರಾಜು ರಹಿತವಾಗಿ ಕಲ್ಲುಗಣಿ ಗುತ್ತಿಗೆಯನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಿದೆ.

ಅದರಂತೆ, ಮೆ|| ಆರ್.ಕೆ. ಗ್ರಾನೈಟ್ಸ್ ಪ್ರೊ. ಶ್ರೀ ಡಿ.ರವಿಕುಮಾರ್, ಬೆಂಗಳೂರು ಇವರು ಕೋಲಾರ ಜಿಲ್ಲೆ ಮತ್ತು ತಾಲ್ಲೂಕು, ದೊಡ್ಡ ಅಯ್ಯೂರು ಗ್ರಾಮದ ಸರ್ವೆ ನಂ. 76ರಲ್ಲಿ 11-20 ಎಕರೆ ಸರ್ಕಾರಿ ಗೋಮಾಳ ಪ್ರದೇಶದಲ್ಲಿ ಕಟ್ಟಡ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿ ದಿನಾಂಕ 10.02.2017 ರಂದು ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿತ ಪ್ರದೇಶದಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಸಂಬಂಧ ಜಿಲ್ಲಾಧಿಕಾರಿ, ಕೋಲಾರ ಜಿಲ್ಲೆ ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿ, ಕೋಲಾರ ರವರಿಂದ ಕಂದಾಯ ಮತ್ತು ಅರಣ್ಯ ಇಲಾಖೆಯ ನಿರಾಕ್ಷೇಪಣಾ ಪತ್ರಗಳು, ರಾಜ್ಯ ಪರಿಸರ ಅಘಾತ ಅಂದಾಜೀಕರಣ ಪ್ರಾಧಿಕಾರದಿಂದ ಪರಿಸರ ಅನುಮತಿ ಪತ್ರ ಪಡೆದು ದಿನಾಂಕ 19.06.2020 ರಿಂದ ಜಾರಿಗೆ ಬರುವಂತೆ 20 ವರ್ಷಗಳಿಗೆ ಎಂ-ಸ್ಯಾಂಡ್ ಉತ್ಪಾದನೆ ಮಾಡಲು ಕಲ್ಲು ಗಣಿ ಗುತ್ತಿಗೆ ಸಂಖ್ಯೆ 08ನ್ನು ಮಂಜೂರು ಮಾಡಲಾಗಿರುತ್ತದೆ.

ಕೋಲಾರ ಜಿಲ್ಲೆ ಮತ್ತು ತಾಲ್ಲೂಕು, ದೊಡ್ಡ ಅಯ್ಯೂರು ಗ್ರಾಮದ ಸರ್ವೆ ನಂ. 76ರಲ್ಲಿ 11-20 ಎಕರೆ ಸರ್ಕಾರಿ ಗೋಮಾಳ ಪ್ರದೇಶದಲ್ಲಿ ಕಟ್ಟಡ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ನೀಡಿರುವುದರ ವಿರುದ್ಧ ಶ್ರೀ ಅಂಜನಾದ್ರಿ ಪರಿಸರ ಹಿತರಕ್ಷಣಾ ಸಮಿತಿ, ದೊಡ್ಡ ಅಯ್ಯೂರು ಗ್ರಾಮ ಇವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಂಖ್ಯೆ 15739/2021ನ್ನು ದಾಖಲಿಸಿರುತ್ತಾರೆ.

ಈ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ 31.08.2021 ರಂದು ಮಧ್ಯಂತರ ಆದೇಶ ನೀಡುತ್ತಾ, ಕಲ್ಲುಗಣಿ ಗುತ್ತಿಗೆ ಸಂಖ್ಯೆ 08ರ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಬಾರದೆಂದು ನಿರ್ದೇಶಿಸಿ ತಡೆಯಾಜ್ಞೆ ನೀಡಿರುತ್ತದೆ.

ಸದರಿ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಗುತ್ತಿಗೆದಾರರು ಇದುವರೆವಿಗೂ ಕಲ್ಲು ಗಣಿಗಾರಿಕೆ ಕಾರ್ಯವನ್ನು ಪ್ರಾರಂಭಿಸಿರುವುದಿಲ್ಲ ಹಾಗೂ ಸದರಿ ಪ್ರದೇಶದಲ್ಲಿ ಯಾವುದೇ ರೀತಿಯ ಅಕ್ರಮ ಗಣಿಗಾರಿಕೆ ನಡೆದಿರುವುದಿಲ್ಲ.

ಸಂಖ್ಯೆ ಸಿಐ 653 ಎಂಎಂಎನ್ 2021

Halappa BA

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.